ಜುಲೈ-2022

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ · ಸ್ವಚ್ಛ ಸಂಕೀರ್ಣ · ಸ್ವಚ್ಛಮೇವ ಜಯತೇ · ಜಲೋತ್ಸವ ಮನೆ ಮನೆಗೆ ಗಂಗೆ · Har Ghar Jal Jal Jeevan Mission

## "Har Ghar Jal Utsav"



**ಜಲ ಜೀವನ್ ಮಿಷನ್** ಯೋಜನೆಯಡಿ ಗ್ರಾಮೀಣ ಪ್ರದೇಶದ ಶೇಕಡಾ 100 ರಷ್ಟು ಮನೆಗಳಿಗೆ ಕಾರ್ಯಾತ್ಮಕ ಗೃಹ ನಳ ಸಂಪರ್ಕವನ್ನು ಕಲ್ಪಿಸಿರುವ ಗ್ರಾಮಗಳನ್ನು **ಹರ್ ಘರ್ ಜಲ್** ಗ್ರಾಮಗಳೆಂದು ಘೋಷಿಸುವಂತೆ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ, ಭಾರತ ಸರ್ಕಾರವು ದೇಶದ ಎಲ್ಲಾ ರಾಜ್ಯ/ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚಿಸಿದೆ. ಈ ನಿಟ್ಟಿನಲ್ಲಿ ರಾಷ್ಟ್ರಾದ್ಯಂತ 25ನೇ ಜುಲೈ ಯಿಂದ 12ನೇ ಆಗಸ್ಟ್ ವರೆಗೂ **ಹರ್ ಘರ್ ಜಲ್ ಉತ್ಸವ್** ಅನ್ನು ಆಯೋಜಿಸುವಂತೆ ಸೂಚಿಸಲಾಗಿದ್ದು, ರಾಜ್ಯದಲ್ಲಿಯೂ **ಹರ್ ಘರ್ ಜಲ್ ಉತ್ಸವ** ಆಯೋಜನೆ ಮಾಡಲಾಗುತ್ತಿದೆ.





## "SUP Ban" Slogan Writing Campaign




ದಿನನಿತ್ಯದ ಚಟುವಟಿಕೆಗಳಲ್ಲಿ ಅತಿಯಾದ ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ **"ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳು-2021"** ರಂತೆ ದೇಶಾದ್ಯಂತ ಏಕ ಬಳಕೆ ಪ್ಲಾಸ್ಟಿಕ್ ಅನ್ನು ನಿಷೇಧಿಸಲಾಗಿದೆ. ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದ್ದರೂ ಸಹ ಇಂದಿಗೂ ಎಲ್ಲೆಡೆ ಯತೇಚ್ಛವಾಗಿ ಏಕ ಬಳಕೆ ಪ್ಲಾಸ್ಟಿಕ್ ಬಳಕೆಯಾಗುತ್ತಿದ್ದು, ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಸಂಬಂಧ ಜಾಗೃತಿ ಮೂಡಿಸಲು ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ, ಭಾರತ ಸರ್ಕಾರವು ರಾಷ್ಟ್ರವ್ಯಾಪಿ **"ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ಸ್ಲೋಗನ್ ಬರಹ ಸ್ಪರ್ಧೆ"**ಯನ್ನು ಆಯೋಜಿಸಿದೆ. ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿರುವ ಇಲಾಖೆ ಸಾರ್ವಜನಿಕ ಸ್ಥಳಗಳಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಸ್ಲೋಗನ್ ಬರೆಸುವಂತೆ ಎಲ್ಲಾ ಜಿಲ್ಲೆಗಳಿಗೂ ಸೂಚನೆ ನೀಡಲಾಗಿದ್ದು, ಸ್ಲೋಗನ್ ಬರವಣಿಗೆ ಕಾರ್ಯ ರಾಜ್ಯಾದ್ಯಂತ ಚಾಲ್ತಿಯಲ್ಲಿದೆ.





## ತರಬೇತಿ ಕಾರ್ಯಕ್ರಮಗಳು

### "ODF+ workshop"




**ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯಡಿ **ODF Plus** ಸಾಧನೆಗಾಗಿ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, **ಜಲಶಕ್ತಿ ಮಂತ್ರಾಲಯ, ಭಾರತ ಸರ್ಕಾರವು UNICEF** ಸಹಯೋಗದೊಂದಿಗೆ ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಿರಿಯ ಅಧಿಕಾರಿಗಳಿಗೆ ದಿನಾಂಕ:12.07.2022ರಂದು ಒಂದು ದಿನದ ಕಾರ್ಯಾಗಾರವನ್ನು ದೆಹಲಿಯಲ್ಲಿ ಆಯೋಜಿಸಿತ್ತು. ಈ ಕಾರ್ಯಾಗಾರದಲ್ಲಿ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ. ಪಂ. ರಾ. ಇಲಾಖೆ ಕರ್ನಾಟಕ ಸರ್ಕಾರ ಮತ್ತು ನಿರ್ದೇಶಕರು, ಉಪ ಕಾರ್ಯದರ್ಶಿ (ಅಭಿವೃದ್ಧಿ) ಸೇರಿದಂತೆ ನಿರ್ದೇಶಕರು(ISA) ಗ್ರಾ.ಕು.ನೀ ಮತ್ತು ನೈ ಇಲಾಖೆ ಇವರುಗಳು ರಾಜ್ಯವನ್ನು ಪ್ರತಿನಿಧಿಸಿದ್ದರು.





### "Orientation for all District CEOs"




ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿ ಸಂಬಂಧ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಕಾರ್ಯಪಾಲಕ ಅಭಿಯಂತರರುಗಳಿಗೆ ಬೆಂಗಳೂರಿನಲ್ಲಿ ದಿನಾಂಕ: 15.07.2022 ರಂದು ಒಂದು ದಿನದ ಮಾಹಿತಿ ವಿನಿಮಯ ಮತ್ತು ತರಬೇತಿಯನ್ನು ಆಯೋಜಿಸಲಾಗಿತ್ತು. ಈ ಕಾರ್ಯಾಗಾರದಲ್ಲಿ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಎಲ್ಲಾ ಜಿಲ್ಲೆಗಳ CEOs & EE ಗಳೊಟ್ಟಿಗೆ ಚರ್ಚೆ ನಡೆಸಿದರು. ಕಾರ್ಯಾಗಾರದಲ್ಲಿ ನಿರ್ದೇಶಕರು, ಗ್ರಾ.ಕು.ನೀ ಮತ್ತು ನೈ ಇಲಾಖೆ ಹಾಗೂ ಮುಖ್ಯ ಅಭಿಯಂತರರು, ಗ್ರಾ.ಕು.ನೀ ಮತ್ತು ನೈ ಇಲಾಖೆ ಸೇರಿದಂತೆ ಇಲಾಖೆಯ ಇತರೆ ಹಿರಿಯ ಅಧಿಕಾರಿಗಳು ಹಾಜರಿದ್ದರು.





### "PFMS ಅನುಷ್ಠಾನ ಸಂಬಂಧ ತರಬೇತಿ"

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ **ಸ್ವಚ್ಛ ಭಾರತ್ ಮಿಷನ್(ಗ್ರಾ)** ಮತ್ತು **ಜಲ ಜೀವನ್ ಮಿಷನ್** ಯೋಜನೆಗಳಡಿ PFMS ಅನುಷ್ಠಾನಗೊಳಿಸುವ ಸಂಬಂಧ 26 & 27ನೇ ಜುಲೈ ರಂದು ಎಲ್ಲಾ ಜಿಲ್ಲೆಗಳ ಲೆಕ್ಕ ಅಧೀಕ್ಷಕರುಗಳಿಗೆ ತರಬೇತಿಯನ್ನು ಆಯೋಜಿಸಲಾಗಿತ್ತು. ಗ್ರಾ.ಕು.ನೀ ಮತ್ತು ನೈ ಇಲಾಖೆಯ ರಾಜ್ಯ ಕಛೇರಿ ಮುಖ್ಯ ಲೆಕ್ಕಾಧಿಕಾರಿ ಸೇರಿದಂತೆ ಲೆಕ್ಕ ಶಾಖೆಯ ಹಿರಿಯ ಅಧಿಕಾರಿಗಳು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು.

### "ISRA ಸಿಬ್ಬಂದಿಗೆ ತರಬೇತಿ"




**ಜಲ ಜೀವನ್ ಮಿಷನ್** ಯೋಜನೆಯಡಿ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ನೂತನವಾಗಿ ಆಯ್ಕೆಯಾಗಿರುವ ISRA ಸಿಬ್ಬಂದಿಗಳಿಗೆ 28 ಮತ್ತು 29ನೇ ಜುಲೈ ರಂದು ಎರಡು ದಿನಗಳ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ನಿರ್ದೇಶಕರು (ISA), ಗ್ರಾ.ಕು.ನೀ ಮತ್ತು ನೈ ಇಲಾಖೆ ಸೇರಿದಂತೆ ರಾಜ್ಯ ಕಛೇರಿಯ ಸಂಪನ್ಮೂಲ ವ್ಯಕ್ತಿಗಳು ಶಿಬಿರಾರ್ಥಿಗಳಿಗೆ ತರಬೇತಿ ನೀಡಿದರು.



